ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/190/ವಿವೇಕ.ಜ.ದಿ/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿರಸ್ತೆ, ಬೆಂಗಳೂರು
ದಿನಾಂಕ: 03.01.2018

## ಸುತ್ತೋಲೆ

ವಿಷಯ: ಸ್ವಾಮಿ ವಿವೇಕಾನಂದರ 155ನೇ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವ ಬಗ್ಗೆ.

ಉಲ್ಲೇಖ: ಮಾನ್ಯ ಉನ್ನತ ಶಿಕ್ಷಣ ಸಚಿವರ ಟಿಪ್ಪಣಿ ಸಂಖ್ಯೆ:ಉಶಿಮಂ/29/2017 ದಿನಾಂಕ:26.12.2017.

* * * * * *

ಉಲ್ಲೇಖಿತ ಟಿಪ್ಪಣಿಯಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಕಾಲೇಜುಗಳಲ್ಲಿ ದಿನಾಂಕ:12.01.2018ರಂದು ಸ್ವಾಮಿ ವಿವೇಕಾನಂದರ 155ನೇ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸುವ ಪ್ರಯುಕ್ತ ವಿಚಾರಗೋಷ್ಠಿ / ವಿಚಾರ ಸಂಕಿರಣ, ಚರ್ಚಾ ಸ್ಪರ್ಧೆ, ಪ್ರಬಂಧ ಸ್ಪರ್ಧೆ, ಭಾಷಣ ಹಾಗೂ ಇನ್ನಿತರೆ ಚಟುವಟಿಕೆಗಳನ್ನು ನಡೆಸಿ, ಸ್ವಾಮಿ ವಿವೇಕಾನಂದರ ವಿಚಾರಧಾರೆ ಹಾಗೂ ಧ್ಯೇಯೋದ್ದೇಶಗಳ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ದಿಸೆಯಲ್ಲಿ ಅರ್ಥಪೂರ್ಣವಾದ ಕಾರ್ಯಕ್ರಮಗಳನ್ನು ತಮ್ಮ ಕಾಲೇಜುಗಳ ಹಂತದಲ್ಲಿಯೇ ಆಯೋಜಿಸುವಂತೆ ಸೂಚಿಸಲಾಗಿದೆ.

ಮುಂದುವರೆದು, ಜಿಲ್ಲಾ ಕೇಂದ್ರಗಳಲ್ಲಿ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು, ಆ ಜಿಲ್ಲೆಗೆ ಸಂಬಂಧಪಟ್ಟ ಮಾನ್ಯ ಸಚಿವರು, ಸಂಸದರು, ಜಿಲ್ಲೆಯ ಎಲ್ಲಾ ಶಾಸಕರುಗಳು (ಎಂಎಲ್ಎ ಮತ್ತು ಎಂಎಲ್‌ಸಿ), ಜಿಲ್ಲಾಧಿಕಾರಿಗಳು ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ಪ್ರಾದೇಶಿಕ ಜಂಟಿ ನಿರ್ದೇಶಕರುಗಳನ್ನು ತೊಡಗಿಸಿಕೊಂಡು ಒಂದು ಕಾರ್ಯಕ್ರಮವನ್ನು ಕಡ್ಡಾಯವಾಗಿ ಏರ್ಪಡಿಸಲು ಕ್ರಮ ಕೈಗೊಂಡು, ಸದರಿ ಕಾರ್ಯಕ್ರಮದ ಕುರಿತು ರಚಿಸುವ ರೂಪರೇಷಗಳನ್ನು ಹಾಗೂ ವರದಿಯನ್ನು ಸಂಬಂಧಪಟ್ಟ ಜಂಟಿ ನಿರ್ದೇಶಕರುಗಳಿಗೆ ಸಲ್ಲಿಸಲು ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ:**

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
2. ಎಲ್ಲಾ ಲೀಡ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಸಂಬಂಧಿಸಿದ ಪ್ರಾದೇಶಿಕ ಜಂಟಿ ನಿರ್ದೇಶಕರ ಮೂಲಕ)
3. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಸಂಬಂಧಿಸಿದ ಪ್ರಾದೇಶಿಕ ಜಂಟಿ ನಿರ್ದೇಶಕರ ಮೂಲಕ)

**ಪ್ರತಿಯನ್ನು:**

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳ ಶಾಖೆಗೆ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಕಛೇರಿ ಪ್ರತಿ.